ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ನಾಗಮಂಗಲ ಮತ್ತು ಮಂಡ್ಯ ಮುಖ್ಯರಸ್ತೆಯ ಕಾಮಗಾರಿ ಪೂರ್ಣಗೊಳ್ಳದೇ ಇರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1015 (1275) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು, ನಾಗಮಂಗಲ-ಮಂಡ್ಯ ಮುಖ್ಯ ರಸ್ತೆಯ ದೇವಲಾಪುರ ಹ್ಯಾಂಡ್‌ಪೋಸ್ಟ್‌ನಿಂದ ತಾಲ್ಲೂಕಿನ ಗಡಿ (ಬಸರಾಳು) ವರೆಗೆ ರಸ್ತೆ ಕಾಮಗಾರಿ ಪ್ರಾರಂಭವಾಗಿ 02 ವರ್ಷಗಳು ಕಳೆದರೂ ಕಾಮಗಾರಿ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಕಾಮಗಾರಿಯ ಅಂದಾಜು ಮೊತ್ತವೆಷ್ಟು ಹಾಗೂ ಅಂದಾಜು ಪ್ರತಿ ಮತ್ತು ಯಾವ ಗುತ್ತಿಗೆದಾರರಿಗೆ ಈ ಕಾಮಗಾರಿ ವಹಿಸಲಾಗಿದೆ; (ವಿವರ ನೀಡುವುದು)

(ಇ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಿಗಧಿತ ಅವಧಿಯಲ್ಲಿ ಪೂರ್ಣಗೊಳ್ಳದಿರುವ ಕಾಮಗಾರಿಗಳಾವುವು; ವಿಳಂಬಕ್ಕೆ ಕಾರಣವೇನು; ಅವಧಿ ವಿಸ್ತರಣೆ ಮಾಡಲು ಸಮಯಾವಕಾಶ ನೀಡಲಾಗಿದೆಯೇ; ನೀಡಿದ್ದಲ್ಲಿ, ಆದೇಶ ಪ್ರತಿ ನೀಡುವುದು;

(ಈ) ಈ ಸಂಬಂಧ ಇಲಾಖಾ ಕಾರ್ಯಪಾಲಕ ಅಭಿಯಂತರರು, ನಾಗಮಂಗಲ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಗುತ್ತಿಗೆದಾರರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)